# ಕರ್ನಾಟಕ ಸರ್ಕಾರ

ಸಂಖ್ಯೆ: ಜಸಂಇ 13 ಎನ್‌ಹೆಚ್‌ಪಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
3ನೇ ಮಹಡಿ, ವಿಕಾಸ ಸೌಧ,
ಬೆಂಗಳೂರು, ದಿನಾಂಕ:24-07-2019.

## ತಿದ್ದುಪಡಿ ಆದೇಶ

ವಿಷಯ: ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:1. ಸರ್ಕಾರದ ಆದೇಶ ಸಂಖ್ಯೆ:ಜಸಂಇ 13 ಎನ್‌ಹೆಚ್‌ಪಿ 2019, ದಿನಾಂಕ:28-02-2019.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಟಿಪ್ಪಣಿ ಸಂಖ್ಯೆ:5549, ದಿನಾಂಕ:22-07-2019.

** ** **

ಉಲ್ಲೇಖಿತ (1) ರ ಸರ್ಕಾರಿ ಆದೇಶ ಭಾಗದ ಕಂಡಿಕೆ-1 ರಲ್ಲಿನ *"ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ತಾತ್ವಿಕ ಅನುಮೋದನೆ ನೀಡಲಾಗಿದೆ ಮತ್ತು 2019-20ನೇ ಸಾಲಿನಲ್ಲಿ ಕಾಮಗಾರಿಯನ್ನು ರೂ.36.00 ಕೋಟಿಗಳ ಅಂದಾಜು ಮೊತ್ತಕ್ಕೆ ಸೀಮಿತಗೊಳಿಸಿ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ."*

ಎಂಬುದನ್ನು

*"ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಮತ್ತು 2019-20ನೇ ಸಾಲಿನಲ್ಲಿ ಕಾಮಗಾರಿಯ ವೆಚ್ಚವನ್ನು ರೂ.36.00 ಕೋಟಿಗಳಿಗೆ ಸೀಮಿತಗೊಳಿಸಿ ಹಾಗೂ ಉಳಿಕೆ ಮೊತ್ತವಾದ ರೂ.108.00 ಕೋಟಿಗಳ ಕಾಮಗಾರಿಯನ್ನು 2020-21ನೇ ಸಾಲಿನಲ್ಲಿ ಕಾವೇರಿ ನೀರಾವರಿ ನಿಗಮಕ್ಕೆ ಹಂಚಿಕೆಯಾಗುವ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿದೆ."* ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

( ಬಿ. ಹರಿನಾರಾಯಣ )
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-3)
ಜಲಸಂಪನ್ಮೂಲ ಇಲಾಖೆ
ಕೊಠಡಿ ಸಂಖ್ಯೆ 316, 3ನೇ ಮಹಡಿ
ವಿಕಾಸಸೌಧ, ಬೆಂಗಳೂರು - 560 001

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-173 /2019, ದಿನಾಂಕ:25-02-2019).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.